ಇ) ಈಗ ಹಾಲಿ ಇರುವ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆಯಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಈ) ಬಂದಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು ?

ಶ್ರೀ ಬಿ. ಬಸವಲಿಂಗಪ್ಪ (ಪಶುಸಂಗೋಪನೆ ಮತ್ತು ಅರಣ್ಯ ಮಂತ್ರಿಗಳು).—

ಅ) ೧೯ ಗ್ರಾಮೀಣ ಪಶುವೈದ್ಯ ಶಾಲೆ ತೆರೆಯುವ ಹಾಗೂ ೬೧ ಗ್ರಾಮೀಣ ಪಶುವೈದ್ಯ ಶಾಲೆಯನ್ನು ಪಶುವೈದ್ಯ ಶಾಲೆಯಾಗಿ ಉನ್ನತೀಕರಿಸಲು ಯೋಜಿಸಲಾಗಿದೆ.

ಆ) ಜಿಲ್ಲೆಗಳಲ್ಲಿ ಸೂಕ್ತ ಸ್ಥಳ ಆಯ್ಕೆ ಆದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಇ) ಹೌದು

ಈ) ಇದರ ಸಲುವಾಗಿ ೨೫೦ ಲಕ್ಷ ರೂ.ಗಳನ್ನು ಯೋಜನೇತರ ಶೀರ್ಷಿಕೆಯಲ್ಲಿ ಔಷಧಿ ಸರಬರಾಜಿಗಾಗಿ ಕಾದಿರಿಸಲಾಗಿದೆ.

ಉತ್ತರ ಕನ್ನಡ ಜಿಲ್ಲೆಯಲ್ಲಿನ ಸರ್ಕಾರಿ ಆಸ್ಪತ್ರೆಗಳ ಬಗ್ಗೆ

೫೧೫. ಶ್ರೀ ಆರ್. ವಿ. ದೇಶಪಾಂಡೆ (ಹಲಿಯಾಳ್).—ಮಾನ್ಯ ಆರೋಗ್ಯ ಮಂತ್ರಿ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಉತ್ತರ ಕನ್ನಡ ಜಿಲ್ಲೆಯಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಹಾಗೂ ಇತರೆ ಸಿಬ್ಬಂದಿ ಎಷ್ಟು ಹುದ್ದೆಗಳು ಖಾಲಿ ಇವೆ ?

ಆ) ಈ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಂಡ ಕ್ರಮಗಳೇನು ?

ಶ್ರೀಮತಿ ಮನೋರಮ ಮಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು).—

ಅ) ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಕಂಡಂತೆ ಇದೆ :

ವೈದ್ಯರುಗಳು—೨೫

ಇತರೆ ಸಿಬ್ಬಂದಿ—೧೭೨

ಆ) ಸರ್ಕಾರದ ಆರ್ಥಿಕ ಮಿತವ್ಯಯದ ಆದೇಶ ಸಡಿಲಗೊಂಡ ನಂತರ ಈ ಹುದ್ದೆಗಳನ್ನು ತುಂಬಲು ಸೂಕ್ತ ಕ್ರಮವನ್ನು ಕೈಗೊಳ್ಳಲಾಗುವುದು.

ಬೆಂಗಳೂರಿನ ವಿಕ್ಟೋರಿಯಾ ಮತ್ತು ವಾಣಿವಿಲಾಸ ಆಸ್ಪತ್ರೆಗಳ ಅಭಿವೃದ್ಧಿ ಬಗ್ಗೆ

೫೫. ಶ್ರೀ ಎ. ಕೃಷ್ಣಪ್ಪ (ವರ್ತೂರು).—ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ೧೯೮೯–೯೦ರಲ್ಲಿ ವಿಕ್ಟೋರಿಯಾ ಮತ್ತು ವಾಣಿವಿಲಾಸ ಆಸ್ಪತ್ರೆಗಳ ಅಭಿವೃದ್ಧಿಗಾಗಿ ಒದಗಿಸಲಾದ ಹಣದ ಮೊತ್ತವೆಷ್ಟು ?

ಆ) ಸದರಿ ಅಭಿವೃದ್ಧಿ ಕಾಮಗಾರಿಗಳು ಈಗ ಯಾವ ಹಂತದಲ್ಲಿವೆ ಹಾಗೂ ಇದುವರೆವಿಗೂ ಖರ್ಚಾದ ಹಣವೆಷ್ಟು ?

ಇ) ಈ ಅಭಿವೃದ್ಧಿ ಕಾರ್ಯಗಳು ಪೂರ್ಣಗೊಳ್ಳಲು ಇನ್ನೂ ಎಷ್ಟು ಅವಧಿ ಬೇಕಾಗುವುದು? ಹೀಗೆ ತಡವಾಗಲು ಕಾರಣವೇನು ?

ಶ್ರೀಮತಿ ಮನೋರಮ ಮಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು).—

ಅ) ೫೨.೦೦ ಲಕ್ಷ ರೂಪಾಯಿಗಳು

ಆ) ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಹಾಸು ಕೆಲಸ ಪ್ರಗತಿಯಲ್ಲಿದೆ. ನೆಲಮಹಡಿ ಮತ್ತು ಮೊದಲನೇ ಮಹಡಿ ಕೆಲಸ ಮುಗಿದು ಸಂಬಂಧಪಟ್ಟ ಅಧಿಕಾರಿಗಳಿಗೆ ಪಹಿಸಿಕೊಡಲಾಗಿದೆ. ೨ನೇ ಮಹಡಿ ಕೆಲಸ ಪ್ರಗತಿ ಪಥದಲ್ಲಿದೆ. ವಾಣಿವಿಲಾಸ ಆಸ್ಪತ್ರೆಯಲ್ಲಿಯೂ ಕೆಲಸ ಪ್ರಗತಿ ಪಥದಲ್ಲಿದೆ. ಈವರೆಗೆ ಳಳಿ.೩೮ ಲಕ್ಷ ರೂಪಾಯಿಗಳು ಖರ್ಚಾಗಿವೆ.

ಇ) ಹಣದ ಅಡಚಣೆಯಿಂದಾಗಿ ತಡವಾಗಿದ್ದು ಸಾಧ್ಯವಾದಷ್ಟು ಬೇಗ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು.